**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03**

ಸಂಖ್ಯೆ: ಎ8/ಎಸ್‌ಎಸ್‌ಎಲ್‌ಸಿ/ಪಫ2/ಪ-3/6/2025-26 ದಿನಾಂಕ:26.06.2025

**:: ಸುತ್ತೋಲೆ ::**

ವಿಷಯ: 2025ರ ಜುಲೈ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪರೀಕ್ಷೆ-3ಕ್ಕೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳ ವಿತರಣೆ ಕುರಿತು.

ಉಲ್ಲೇಖ: ಮಂಡಲಿಯಿಂದ ಪ್ರಕಟಿಸಿರುವ ಎಸ್.ಎಸ್.ಎಲ್.ಸಿ ಪರೀಕ್ಷೆ-3ರ ವೇಳಾಪಟ್ಟಿ ಸಂಖ್ಯೆ: ಸಿ1/ SSLC/ಪ-3/ವೇ.ಪ/30/2025-26 ದಿನಾಂಕ:12/06/2025

* * * * *

2025ರ ಜುಲೈ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಪರೀಕ್ಷೆ-3ಕ್ಕೆ ಹಾಜರಾಗುತ್ತಿರುವ 2025ರ ಪರೀಕ್ಷೆ-1 ಮತ್ತು ಪರೀಕ್ಷೆ-2ಕ್ಕೆ ಗೈರು ಹಾಜರಾದ / ಪೂರ್ಣಗೊಳಿಸಲಾಗಿಲ್ಲದ [Not Completed] / ಹಿಂದಿನ ಸಾಲಿನಲ್ಲಿ ಅನುತ್ತೀರ್ಣರಾದ ಹಾಗೂ **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ಅಭ್ಯರ್ಥಿಗಳ ಅಂತಿಮ ಪ್ರವೇಶ ಪತ್ರಗಳನ್ನು ದಿನಾಂಕ:26.06.2025 ರಂದು ಅಪರಾಹ್ನ ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಶಾಲಾ ಮುಖ್ಯೋಪಾಧ್ಯಾಯರು ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿತರಿಸುವುದು. ಒಂದು ವೇಳೆ ಏನಾದರೂ ವ್ಯತ್ಯಯಗಳು ಕಂಡು ಬಂದಲ್ಲಿ ಕೂಡಲೇ ಮಂಡಳಿಯ ಸಂಬಂಧಿಸಿದ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳ ಗಮನಕ್ಕೆ ತಂದು ಸರಿಪಡಿಸಿಕೊಂಡು ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿತರಿಸುವುದು.

ತಮ್ಮ ಶಾಲೆಯ ಮುಖಾಂತರ ನೋಂದಾಯಿಸಿದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ, ಡೌನ್‌ಲೋಡ್ ಮಾಡಿಕೊಂಡ **ಪ್ರವೇಶ ಪತ್ರಗಳ ಸಂಖ್ಯೆ ಸರಿ ಹೊಂದುತ್ತಿವೆಯೇ ಎಂದು** ಪರಿಶೀಲಿಸಿಕೊಳ್ಳುವುದು. ಒಂದು ವೇಳೆ ಯಾವುದಾದರು ವಿದ್ಯಾರ್ಥಿಯ ಪ್ರವೇಶ ಪತ್ರ ಬಂದಿಲ್ಲದಿದ್ದರೆ, ಸದರಿ ವಿದ್ಯಾರ್ಥಿಯ ವಿವರವನ್ನು ಸಮರ್ಥನೆಯೊಂದಿಗೆ / ದಾಖಲೆಗಳೊಂದಿಗೆ ಮಂಡಳಿಗೆ ಕೂಡಲೇ ಕಳುಹಿಸಿಕೊಡುವುದು.

1. ಪ್ರವೇಶ ಪತ್ರದಲ್ಲಿ ಹಾಗೂ ಕೇಂದ್ರ ನಾಮಯಾದಿಪಟ್ಟಿಯಲ್ಲಿ ಭಾವಚಿತ್ರ ಇಲ್ಲದೇ ಇರುವ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನೀಡಲಾಗುವುದಿಲ್ಲ. ಇದರಿಂದ ವಿದ್ಯಾರ್ಥಿಗೆ ಆಗುವ ತೊಂದರೆಗೆ ಸಂಬಂಧಿಸಿದ ಶಾಲಾ ಮುಖ್ಯಸ್ಥರೇ ಜವಾಬ್ದಾರರಾಗಿದ್ದು, ಮಂಡಳಿಯು ಇದರ ಜವಾಬ್ದಾರಿ ಹೊರುವುದಿಲ್ಲ ಎಂದು ಸ್ಪಷ್ಟಪಡಿಸಿದೆ.
2. ಶಾಲಾ ಲಾಗಿನ್‌ನಿಂದ ಮುದ್ರಿಸಿಕೊಂಡಿರುವ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಕೂಡಲೇ ವಿತರಿಸುವುದು ಹಾಗೂ ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ತಪ್ಪದೇ ಪಾಲಿಸುವಂತೆ ತಿಳಿಸುವುದು.
3. ಪುನರಾವರ್ತಿತ ವಿದ್ಯಾರ್ಥಿಗಳಿಗೆ ಪಾಸಾದ ವಿಷಯಕ್ಕೆ ಪರೀಕ್ಷೆ ಬರೆಯುವಂತೆ ಮುದ್ರಣವಾಗಿದ್ದಲ್ಲಿ, ಪಾಸಾದ ಬಗ್ಗೆ ಚುಕ್ಕೆ ಗುರುತಿಲ್ಲದ ಫಲಿತಾಂಶ ಪಟ್ಟಿಯನ್ನು ಮುಖ್ಯಶಿಕ್ಷಕರು ದೃಢೀಕರಿಸಿ ಪರೀಕ್ಷೆ ಪ್ರಾರಂಭವಾಗುವುದಕ್ಕೆ ಮುಂಚಿತವಾಗಿ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳಿಗೆ ಕಳುಹಿಸುವುದು.
4. ಪ್ರವೇಶ ಪತ್ರವನ್ನು ಪಡೆಯುವಲ್ಲಿ ಅಭ್ಯರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಸೂಕ್ತ ಕ್ರಮವಹಿಸುವುದು.

**ಜುಲೈ-2025ರ ಎಸ್.ಎಸ್.ಎಲ್.ಸಿ ಪರೀಕ್ಷೆ-3ರ ಅಂತಿಮ ಪ್ರವೇಶ ಪತ್ರಗಳಲ್ಲಿ ತಿದ್ದುಪಡಿಗಳಿದಲ್ಲಿ ಪ್ರಸ್ತಾವನೆಯನ್ನು ರವಾನಿಸಬೇಕಾದ ಮಂಡಳಿಯ ಅಧಿಕಾರಿಗಳ ಹೆಸರು ಮತ್ತು ಸಂಬಂಧಿಸಿದ ಜಿಲ್ಲೆಗಳ ಮಾಹಿತಿ.**

| ಕ್ರ ಸಂ | ಶಾಖೆ | ಪರಿಶೀಲನಾ ಅಧಿಕಾರಿಗಳು ಶ್ರೀಮತಿ/ ಶ್ರೀ | ಜಿಲ್ಲೆ | ದೂರವಾಣಿ ಸಂಖ್ಯೆ |
|---|---|---|---|---|
| 1 | ಎಫ್ | ಅಯೂಬ್ ಪಾಷಾ, ಸಹಾಯಕ ನಿರ್ದೇಶಕರು | ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಕೋಲಾರ, ಮಧುಗಿರಿ. | **9480021609** |
| 2 | ಜಿ | ಬಿ. ನರೇಂದ್ರಕುಮಾರ್, ಸಹಾಯಕ ನಿರ್ದೇಶಕರು | ಬೆಂಗಳೂರು ಉತ್ತರ, ರಾಮನಗರ, ತುಮಕೂರು, ಶಿವಮೊಗ್ಗ. | **9900190492** |
| 3 | ಹೆಚ್ | ಅನಿತ ಆರ್ ಸಹಾಯಕ ನಿರ್ದೇಶಕರು | ಚಾಮರಾಜನಗರ, ಮಂಡ್ಯ ಮೈಸೂರು, ಉಡುಪಿ. | **9620213336** |

| | | | | |
|---|---|---|---|---|
| 4 | ಐ | ಉಮಾರಾಣಿ,<br>ಹಿರಿಯ ಸಹಾಯಕ ನಿರ್ದೇಶಕರು | ದಕ್ಷಿಣ ಕನ್ನಡ, ಹಾಸನ, ಚಿಕ್ಕಮಗಳೂರು, ಕೊಡಗು | **6363822574** |
| 5 | ಜೆ | ಜಯರಾಮುಡು,<br>ಸಹಾಯಕ ನಿರ್ದೇಶಕರು | ಬೆಳಗಾವಿ, ಚಿಕ್ಕೋಡಿ, ವಿಜಯಪುರ, ಬಾಗಲಕೋಟೆ | **9449674952** |
| 6 | ಕೆ | ಗಾಯತ್ರಿದೇವಿ.,<br>ಹಿರಿಯ ಸಹಾಯಕ ನಿರ್ದೇಶಕರು | ಧಾರವಾಡ, ಶಿರಸಿ, ಉತ್ತರ ಕನ್ನಡ, ಹಾವೇರಿ | **9986090437** |
| 7 | ಎಲ್ | ಸೋಮಶೇಖರ್ ಕೆ<br>ಸಹಾಯಕ ನಿರ್ದೇಶಕರು | ಬಳ್ಳಾರಿ, ವಿಜಯನಗರ, ಯಾದಗಿರಿ, ರಾಯಚೂರು, | **9663312146** |
| 8 | ಎಂ | ಶ್ರೀನಿವಾಸಮೂರ್ತಿ ಜಿ<br>ಸಹಾಯಕ ನಿರ್ದೇಶಕರು | ಕಲಬುರಗಿ, ಬೀದರ್, ಕೊಪ್ಪಳ | **9880269958** |
| 9 | ಎನ್ | ಲೋಕೇಶ್ ಎಂ<br>ಸಹಾಯಕ ನಿರ್ದೇಶಕರು | ಬೆಂಗಳೂರು ಗ್ರಾಮಾಂತರ, ದಾವಣಗೆರೆ, ಚಿತ್ರದುರ್ಗ, ಗದಗ | **9845314029** |

ಜುಲೈ –2025ರ ಪರೀಕ್ಷೆ–3ರ ವೇಳಾಪಟ್ಟಿಯಂತೆ ಪರೀಕ್ಷೆಗೆ ಸಕಾಲದಲ್ಲಿ ಹಾಜರಾಗಲು ಸಂಬಂಧಿಸಿದ ಅಭ್ಯರ್ಥಿಗಳಿಗೆ/ಪೋಷಕರಿಗೆ ಮನವರಿಕೆ ಮಾಡಲು ಮುಖ್ಯಶಿಕ್ಷಕರಿಗೆ ತಿಳಿಸಿದೆ.

**ಅಂತಿಮ ಪ್ರವೇಶ ಪತ್ರಗಳ ವಿತರಣೆ,ಇತ್ಯಾದಿ ವಿಷಯಗಳ ಕುರಿತು ಯಾವುದೇ ಮಾಹಿತಿ ಪಡೆಯಲು ಕೆಳಕಂಡ ಸಹಾಯವಾಣಿ ಸಂಖ್ಯೆಗಳಿಗೆ ಕರೆಮಾಡಿ ಮಾಹಿತಿ ಪಡೆಯಬಹುದಾಗಿರುತ್ತದೆ.**

**080– 23310075 ಮತ್ತು 080– 23310076**

**(ಕಛೇರಿ ಅವಧಿಯಲ್ಲಿ ಬೆಳಗ್ಗೆ 10.00 ಗಂಟೆ ಯಿಂದ ಸಂಜೆ 5.30 ವರೆಗೆ)**

26/6/2025

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು ಪರೀಕ್ಷೆಗಳು

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
4. ಶಾಖಾಧಿಕಾರಿಗಳು, ಬಿ & ಸಿ ಶಾಖೆಗೆ ಮತ್ತು ಲೆಕ್ಕಪತ್ರಶಾಖೆಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು ಗಣಕ ಶಾಖೆ ಇವರು ಈ ಸುತ್ತೋಲೆಯನ್ನು ಮಂಡಳಿಯ ಜಾಲತಾಣ & ಶಾಲಾಲಾಗಿನ್‌ನಲ್ಲಿ ಪ್ರಕಟಿಸುವುದು.
6. ಮಂಡಳಿಯ ಎಲ್ಲಾ ಶಾಖಾಧಿಕಾರಿಗಳು ಮತ್ತು ಅಧೀಕ್ಷಕರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು :–**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಅಪರ ಆಯುಕ್ತರು, ಶಾಲಾ ಇಲಾಖೆ, ಕಲಬುರಗಿ ಮತ್ತು ಧಾರವಾಡ ವಿಭಾಗರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಅಧ್ಯಕ್ಷರು, ಕ.ಶಾ.ಪ.ಮೌ.ಮಂಡಲಿ ರವರ ಆಪ್ತ ಶಾಖೆಗೆ ಮಾಹಿತಿಗಾಗಿ.
4. ನಿರ್ದೇಶಕರು / ಕಾರ್ಯದರ್ಶಿಗಳ ಆಪ್ತ ಶಾಖೆಗೆ ಮಾಹಿತಿಗಾಗಿ,
5. ಕಛೇರಿ ಪ್ರತಿ.